# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿನ ಕೃಷಿಭಾಗ್ಯ ಯೋಜನೆಯ ಅಡಿಯಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಕೃಷಿ ಆಯುಕ್ತರ ಕಛೇರಿ
1775
10 OCT 2014
ಶೇಷಾದ್ರಿ ರಸ್ತೆ, ಬೆಂಗಳೂರು

ಓದಲಾಗಿದೆ: 1. **ಸರ್ಕಾರದ ಆದೇಶ ಸಂ: ಕೃಇ/08/ಕೃಯೋಕಾ/2014, ದಿ:22-7-2014.**

2. **ಕೃಷಿ ನಿರ್ದೇಶಕರ ಪತ್ರ ಸಂಉಕೃನಿ(ಎ.ಕಾ) ಕೃಭಾ/2014-15, ದಿ: 10-09-2014.**

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2014-15 ನೇ ಸಾಲಿನಲ್ಲಿ ದಿನಾಂಕ:14-2-2014 ರಂದು ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯದ ಭಾಷಣದ ಕಂಡಿಕೆ 26,27 ಮತ್ತು 28ರಲ್ಲಿ ಘೋಷಿಸಿದಂತೆ, ರಾಜ್ಯದ ಮಳೆಯಾಶ್ರಿತ ಕೃಷಿ ನೀತಿಯನ್ನು ಒಣ ವಲಯದಲ್ಲಿ ಅಳವಡಿಸುವ ಸಲುವಾಗಿ ಕೃಷಿಭಾಗ್ಯ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ನಿರ್ದೇಶಕರು, 2014-15ನೇ ಸಾಲಿನಲ್ಲಿ ಕೃಷಿಭಾಗ್ಯ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆಯವ್ಯಯದಲ್ಲಿ ಕಲ್ಪಿಸಲಾಗಿರುವ ರೂ.500.00 ಕೋಟಿ ಅನುದಾನದಲ್ಲಿ ರೂ.125.00 ಕೋಟಿಗಳನ್ನು ಬಿಡುಗಡೆ ಮಾಡಲು ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, 2014-15ನೇ ಸಾಲಿನಲ್ಲಿ ಕೃಷಿಭಾಗ್ಯ ಯೋಜನೆಗೆ ಆಯವ್ಯಯದ ಲೆಕ್ಕ ಶೀರ್ಷಿಕೆ: 2401-00-800-1-68 ರಡಿಯಲ್ಲಿ ರೂ.500.00ಕೋಟಿ ಅನುದಾನ ಕಲ್ಪಿಸಲಾಗಿದ್ದು, ಅದರಲ್ಲಿ ಮೊದಲನೆ ಮತ್ತು ಎರಡನೇ ಕಂತಿನ ಅನುದಾನವಾಗಿ ರೂ.250.00 ಕೋಟಿ ಮೊತ್ತವನ್ನು ಬಿಡುಗಡೆಗೊಳಿಸಲು ಸರ್ಕಾರವು ನಿರ್ಧರಿಸಿದ್ದು, ಅದಕ್ಕಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/08/ಕೃಯೋಕಾ/2014(ಭಾಗ-3), ಬೆಂಗಳೂರು, ದಿನಾಂಕ: 01-10-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2014-15ನೇ ಸಾಲಿನಲ್ಲಿ ಕೃಷಿಭಾಗ್ಯ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಮೊದಲನೆ ಮತ್ತು ಎರಡನೇ ಕಂತಿನ ಅನುದಾನವಾಗಿ **ರೂ.250.00 ಕೋಟಿ ಮೊತ್ತವನ್ನು (ರೂಪಾಯಿ ಇನ್ನೂರ ಐವತ್ತು ಕೋಟಿ ಮಾತ್ರ) ಆಯವ್ಯಯದ ಲೆಕ್ಕ ಶೀರ್ಷಿಕೆ: 2401-00-800-1-68** ರಡಿಯಲ್ಲಿ ಮೂಲಕ ಬಿಡುಗಡೆ ಮಾಡಲಾಗಿದೆ.

ಈ ಆದೇಶದ ಮೂಲಕ ಬಿಡುಗಡೆಯಾದ ಅನುದಾನ ರೂ.250.00 ಕೋಟಿಗಳಲ್ಲಿ, ನಿರ್ದೇಶಕರು ತೋಟಗಾರಿಕೆ ಇಲಾಖೆ ರವರಿಗೆ **ರೂ.125.00** ಕೋಟಿ ಮೊತ್ತವನ್ನು (ರೂಪಾಯಿ ನೂರ ಇಪ್ಪತ್ತೈದು ಕೋಟಿಗಳು ಮಾತ್ರ) ಪಾಲಿ ಹೌಸ್ ನಿರ್ಮಾಣದ ಘಟಕ ಹಾಗೂ ಇತರೆ ಪಾಲಿ ಹೌಸ್ ರಹಿತ ಮಾದರಿ ಘಟಕಗಳ ಅನುಷ್ಠಾನಕ್ಕೆ ಬಿಡುಗಡೆ ಮಾಡುವುದು.

ಕೃಷಿ ಆಯುಕ್ತರು, ಬಿಡುಗಡೆ ಮಾಡಲಾದ ಅನುದಾನವನ್ನು ಕೃಷಿಭಾಗ್ಯ ಯೋಜನೆಯ ಅನುಷ್ಠಾನಕ್ಕೆ ಸರ್ಕಾರವು ಈಗಾಗಲೇ ಹೊರಡಿಸಿರುವ ಆದೇಶ ಸಂಖ್ಯೆ: ಕೃಇ/08/ಕೃಯೋಕಾ/2014. ದಿನಾಂಕ:22-7-2014ರ ಮಾರ್ಗಸೂಚಿಯನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸತಕ್ಕದ್ದು, ಹಾಗೂ ಬಿಡುಗಡೆಯಾದ ಅನುದಾನವನ್ನು ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದ ಕೃಷಿ ಮತ್ತು ಇತರೆ ಇಲಾಖೆಗಳಿಗೆ ಆದ್ಯತೆ/ಬೇಡಿಕೆಯನುಸಾರ ಬಿಡುಗಡೆಗೊಳಿಸುವುದು. ಈ ಸಂಬಂಧ ಇತರೆ ಇಲಾಖೆಗಳಿಗೆ ಅನುದಾನ ಬಿಡುಗಡೆ ಮಾಡಲು **ಸದರಿ ಇಲಾಖೆಗಳು ಸಲ್ಲಿಸುವ Grant-in Aid ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡಲಾಗಿದೆ.**

ADD (CDP)

Sd/- 14/10/14

Sd/- 15/10 953 16/10/14

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/03/ಟಿಎಫ್‌ಪಿ/2014, ದಿನಾಂಕ:04-04-2014ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಜ್ಯೋತಿ.ಆರ್.ಜೆ),**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಕೃಷಿ ಇಲಾಖೆ (ಯೋಜನೆ).**

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತಕಾರ್ಯದರ್ಶಿ, ವಿಧಾನಸೌಧ.
5. ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
6. ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ.
7. ಪ್ರಧಾನ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ.
8. ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ.
9. ಪ್ರಧಾನ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
10. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
11. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
12. ಆಯುಕ್ತರು/ನಿರ್ದೇಶಕರು, ರೇಷ್ಮೆ ಇಲಾಖೆ, ಬೆಂಗಳೂರು.
13. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಸಚಿವ ಸಂಪುಟ ಶಾಖೆ- ಕಾರ್ಯಸೂಚಿ ಸಂಖ್ಯೆ:3, ದಿ: 25-06-2014(ಸಿ334/2014).
15. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
18. ಸರ್ಕಾರದ ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
19. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.